## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021-22ನೇ ಸಾಲಿನ 15ನೇ ಹಣಕಾಸು ಆಯೋಗದ ಎರಡನೇ ಕಂತಿನ ಮೂಲ (ಅನಿರ್ಬಂಧಿತ) ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ 191 ಜಿಪಸ 2020, ದಿನಾಂಕ:13-05-2020.
2. ಸರ್ಕಾರದ ಸೇರ್ಪಡೆ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ 191 ಜಿಪಸ 2020, ದಿನಾಂಕ: 30-05-2020, 05-10-2020, 22-01-2021, 06-07-2021 ಹಾಗೂ 17-11-2021.
3. ಭಾರತ ಸರ್ಕಾರದ ವಿತ್ತ ಮಂತ್ರಾಲಯ, ವೆಚ್ಚ ಇಲಾಖೆ, ಆರ್ಥಿಕ ಆಯೋಗ ವಿಭಾಗದ ಪತ್ರ ಸಂ.ಎಫ್.15(4)ಎಫ್‌ಸಿ-XV/ಎಫ್‌ಸಿಡಿ/2020-25, ದಿನಾಂಕ:11-03-2022.
4. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ:FD 26 BGL 2021, ದಿನಾಂಕ:15-03-2022.
5. ಆರ್ಥಿಕ ಇಲಾಖೆಯ ಆ.ಆ.ಕೋ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 28 ಆಆಕೋ-1, ದಿನಾಂಕ:16-03-2022.

**ಪ್ರಸ್ತಾವನೆ:**

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2021-22ನೇ ಸಾಲಿಗೆ ಒಟ್ಟು **ರೂ.237700.00** ಲಕ್ಷಗಳ ಅನುದಾನವನ್ನು ಭಾರತ ಸರ್ಕಾರವು ನಿಗಧಿಪಡಿಸಿರುತ್ತದೆ. 15ನೇ ಹಣಕಾಸು ಆಯೋಗದ 2021-22ನೇ ಸಾಲಿನ ಮೂಲ (ಅನಿರ್ಬಂಧಿತ) ಅನುದಾನದ ಎರಡನೇ ಕಂತು ರೂ.47390.47 ಲಕ್ಷಗಳ ಅನುದಾನವನ್ನು ಉಲ್ಲೇಖ(3) ರನ್ವಯ ಭಾರತ ಸರ್ಕಾರವು ಬಿಡುಗಡೆ ಮಾಡಿದೆ.

ಮೇಲೆ ಓದಲಾದ ಉಲ್ಲೇಖ(4)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಹಾಗೂ (5)ರ ಅನಧಿಕೃತ ಟಿಪ್ಪಣಿಯನ್ವಯ 2021-22ನೇ ಸಾಲಿನ ಮೂಲ (ಅನಿರ್ಬಂಧಿತ) ಅನುದಾನದ ಎರಡನೇ ಕಂತು ರೂ.47390.47(ನಾಲ್ಕು ನೂರ ಎಪ್ಪತ್ತೂರು ಕೋಟಿ ತೊಂಬತ್ತು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2021-22ನೇ ಸಾಲಿನ ಮೂಲ (ಅನಿರ್ಬಂಧಿತ) ಅನುದಾನದ ಎರಡನೇ ಕಂತು ರೂ.473,90,47,000/-(ನಾಲ್ಕು ನೂರ ಎಪ್ಪತ್ತೂರು ಕೋಟಿ ತೊಂಬತ್ತು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಾದ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಿಗೆ ಅನುಕ್ರಮವಾಗಿ 5:10:85ರ ಅನುಪಾತದಲ್ಲಿ ಬಿಡುಗಡೆ ಮಾಡಬೇಕಾಗಿರುತ್ತದೆ.

ಪ್ರಸ್ತುತ 2021-22ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಜಿಲ್ಲಾ ಪಂಚಾಯತ್‌ಗಳಿಗೆ ಲೆಕ್ಕ ಶೀರ್ಷಿಕೆ:2515-00-196-6-12ರಡಿ ರೂ.11885.00 ಲಕ್ಷಗಳು, ತಾಲ್ಲೂಕು ಪಂಚಾಯತಿಗಳಿಗೆ ಲೆಕ್ಕ ಶೀರ್ಷಿಕೆ:2515-00-197-6-12ರಡಿ ರೂ.23770.00ಲಕ್ಷಗಳು ಹಾಗೂ ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕ ಶೀರ್ಷಿಕೆ:2515-00-198-6-13ರಡಿ ರೂ.202045.00ಲಕ್ಷಗಳು, ಒಟ್ಟು ರೂ.237700.00 ಲಕ್ಷಗಳನ್ನು ಒದಗಿಸಲಾಗಿದೆ. ಸದರಿ ಮೊತ್ತದಲ್ಲಿ 2021-22ನೇ ಸಾಲಿನ ಮೂಲ (ಅನಿರ್ಬಂಧಿತ) ಅನುದಾನದ ಎರಡನೇ ಕಂತು

ರೂ.47390.47ಲಕ್ಷಗಳನ್ನು ಮೇಲೆ ಓದಲಾದ(1) ಮತ್ತು (2)ರ ಮಾರ್ಗಸೂಚಿಗಳನ್ವಯ ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ 5:10:85ರ ಅನುಪಾತದಂತೆ ಜಿಲ್ಲಾ ಪಂಚಾಯತ್‌ಗಳಿಗೆ ರೂ.23,69,52,350/-ಗಳು, ತಾಲ್ಲೂಕು ಪಂಚಾಯತಿಗಳಿಗೆ ರೂ.47,39,04,700/-ಗಳು ಹಾಗೂ ಗ್ರಾಮ ಪಂಚಾಯತಿಗಳಿಗೆ ರೂ.402,81,89,950/-ಗಳನ್ನು ಖಜಾನೆ-2ರ ಮುಖಾಂತರ ನೇರವಾಗಿ ಸಂಬಂಧಪಟ್ಟ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 240 ಜಿಪಸ 2021, ದಿನಾಂಕ:18-03-2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2021-22ನೇ ಸಾಲಿಗೆ ಕೇಂದ್ರ ಸರ್ಕಾರವು ರಾಜ್ಯಕ್ಕೆ ಬಿಡುಗಡೆ ಮಾಡಿರುವ ಮೂಲ (ಅನಿರ್ಬಂಧಿತ) ಅನುದಾನದ ಎರಡನೇ ಕಂತಿನ ಅನುದಾನ ರೂ.473,90,47,000/-(ನಾಲ್ಕು ನೂರ ಎಪ್ಪತ್ಮೂರು ಕೋಟಿ ತೊಂಬತ್ತು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಾದ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತಿಗಳಿಗೆ ಕ್ರಮವಾಗಿ 5:10:85ರ ಅನುಪಾತದಲ್ಲಿ ಜಿಲ್ಲಾ ಪಂಚಾಯತ್‌ಗಳಿಗೆ ರೂ.23,69,52,350/-ಗಳು (ಅನುಬಂಧ-I), ತಾಲ್ಲೂಕು ಪಂಚಾಯತಿಗಳಿಗೆ ರೂ.47,39,04,700/-ಗಳು (ಅನುಬಂಧ-II) ಹಾಗೂ ಗ್ರಾಮ ಪಂಚಾಯತಿಗಳಿಗೆ ರೂ.402,81,89,950/-ಗಳ(ಅನುಬಂಧ-III) ಅನುದಾನವನ್ನು ಸಂಬಂಧಪಟ್ಟ ಬ್ಯಾಂಕ್‌ಗಳ ಖಾತೆಗಳಿಗೆ ಖಜಾನೆ-2 ಮೂಲಕ ಜಮೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2021, ದಿನಾಂಕ: 31-12-2021ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

18/3/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
18/3/22

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.

4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
5. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
8. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ – ಪತ್ರಿಕೆಯಲ್ಲಿ ಪ್ರಕಟಿಸಲು.
9. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ &ಆರ್) ರವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
8. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು
9. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.